# ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ

**ಸಂಚಾರ ಆಚರಣೆ ಶಾಖೆ, ಕೇಂದ್ರ ಕಛೇರಿ, 2ನೇ ಮಹಡಿ, ಕೆ.ಹೆಚ್.ರಸ್ತೆ,**
**ಶಾಂತಿನಗರ, ಬೆಂಗಳೂರು-560 027**

**ಇ-ಮೇಲ್: ctmo@mybmtc.com** **ದೂ.ಸಂ: 080-22537559**


**ಸಂಖ್ಯೆ: ಬೆಂಮಸಾಸಂ/ಕೇಕ/ಸಂ(ಆ)/ಸಾ-1/36-ಎ/1691/2019-20** **ದಿನಾಂಕ: 19.09.2019**

## ಸುತ್ತೋಲೆ ಸಂಖ್ಯೆ: 495/2019

(ಸಂಚಾರ ಆಚರಣೆ ಶಾಖೆಯಿಂದ ಹೊರಡಿಸಲಾಗಿದೆ)

**ವಿಷಯ:** ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರು ಮೊಬೈಲ್‌ಗಳ ಲೌಡ್‌ಸ್ಪೀಕರ್‌ಗಳಲ್ಲಿ ಹಾಡುಗಳನ್ನು ಹಾಕುವುದನ್ನು ನಿರ್ಬಂಧಿಸಿರುವ ಬಗ್ಗೆ.

**ಉಲ್ಲೇಖ:** ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 25576/2019(PIL) ದಿನಾಂಕ: 17.06.2019

{******}

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಪ್ರಸ್ತುತ ಪ್ರತಿದಿನ ಒಟ್ಟು 6203 ಅನುಸೂಚಿಗಳಿಂದ 69721 ಸುತ್ತುವಳಿಗಳು ಕಾರ್ಯಾಚರಣೆ ಮಾಡುತಿದ್ದು, ಸುಮಾರು 35.77 ಲಕ್ಷ ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಒದಗಿಸುತ್ತಿದೆ. ಸಾರ್ವಜನಿಕ ಪ್ರಯಾಣಿಕರಿಗೆ ಸುರಕ್ಷಿತ ಹಾಗೂ ಉತ್ತಮ ಸಾರಿಗೆ ಸೌಲಭ್ಯ/ಸಂಪರ್ಕ ಕಲ್ಪಿಸುವ ದೃಷ್ಟಿಯಿಂದ, ನಗರದ ವಿವಿಧ ಭಾಗಗಳಿಂದ ಕಾರ್ಯಾಚರಣೆ ಮಾಡುತ್ತಿದೆ.

ಸಾರ್ವಜನಿಕ ಸಾರಿಗೆಗಳಾದ ಬಿ.ಎಂ.ಟಿ.ಸಿ, ಕೆ.ಎಸ್.ಆರ್.ಟಿ.ಸಿ ಮತ್ತು ಇಂಡಿಯನ್ ರೈಲ್ವೇಗಳಲ್ಲಿ ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989 ರ ನಿಯಮ 94(1) (V) ಅನ್ನು ಉಲ್ಲಂಘಿಸಿ ಮೊಬೈಲ್‌ಗಳಲ್ಲಿ ಜೋರಾಗಿ ಹಾಡುಗಳನ್ನು ಹಾಕುವುದರಿಂದ ಶಬ್ಧಮಾಲಿನ್ಯ ಉಂಟಾಗುತ್ತಿದ್ದು, ಇತರೆ ಪ್ರಯಾಣಿಕರಿಗೆ ತೊಂದರೆ ಉಂಟಾಗುತ್ತಿರುವುದಾಗಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 25576/2019(PIL) ಪ್ರಕರಣವನ್ನು ದಾಖಲು ಮಾಡಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಕರು ತಮ್ಮ ಮೊಬೈಲ್‌ಗಳ ಲೌಡ್‌ಸ್ಪೀಕರ್‌ಗಳಲ್ಲಿ ಹಾಡುಗಳನ್ನು ಹಾಕುವುದನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ನಿರ್ಬಂಧಿಸಿದ್ದು, ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಆದೇಶಿಸಲಾಗಿದೆ:

- ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವ ಸಾರ್ವಜನಿಕ ಪ್ರಯಾಣಿಕರು ತಮ್ಮ ಮೊಬೈಲ್‌ಗಳ ಲೌಡ್‌ಸ್ಪೀಕರ್‌ಗಳಲ್ಲಿ ಹಾಡುಗಳನ್ನು ಹಾಕುವುದನ್ನು ಕಡ್ಡಾಯವಾಗಿ ನಿರ್ಭಂಧಿಸಲು ಕ್ರಮ ಕೈಗೊಳ್ಳುವುದು.
- ಈ ಕುರಿತು ಕರ್ತವ್ಯ ನಿರತ ಚಾಲನಾ ಸಿಬ್ಬಂದಿಯು ಸಾರ್ವಜನಿಕ ಪ್ರಯಾಣಿಕರಿಗೆ ತಿಳುವಳಿಕೆಯನ್ನು ನೀಡುವುದು.

- ಈ ಕುರಿತು ಸಾರ್ವಜನಿಕ ಪ್ರಯಾಣಿಕರಿಗೆ ಮಾಹಿತಿಯನ್ನು ತಲುಪಿಸಲು ಸಾರ್ವಜನಿಕ ಸಂಪರ್ಕ ಅಧಿಕಾರಿಯವರು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
- ಈ ಮಾಹಿತಿಯನ್ನು ಬಸ್ಸುಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರ ಗಮನಕ್ಕೆ ತರುವ ಸಂಬಂಧ ಸಂಸ್ಥೆಯ ವಾಹನಗಳಲ್ಲಿ ಸ್ಟಿಕ್ಕರಿಂಗ್ ಮೂಲಕ ಮಾಹಿತಿಯನ್ನು ಪ್ರದರ್ಶಿಸಲು ಮುಖ್ಯ ತಾಂತ್ರಿಕ ಅಭಿಯಂತರರು(ನಿ) ಹಾಗೂ ಕಾರ್ಯ ವ್ಯವಸ್ಥಾಪಕರು ಅಗತ್ಯ ಕ್ರಮ ಕೈಗೊಳ್ಳುವುದು.

ಸುತ್ತೋಲೆಯನ್ನು ಸಂಬಂಧಪಟ್ಟ ಎಲ್ಲಾ ಸಿಬ್ಬಂದಿಗಳ ಗಮನಕ್ಕೆ ತರುವುದು.

ಈ ಸುತ್ತೋಲೆಯ ಆದೇಶವು ತಕ್ಷಣದಿಂದಲೇ ಜಾರಿಗೆ ಬರುತ್ತದೆ.

ಸುತ್ತೋಲೆಯು ತಲುಪಿದಕ್ಕೆ ತಪ್ಪದೇ ಸ್ವೀಕೃತಿಯನ್ನು ನೀಡುವುದು.

ಸಹಿ/-

**ವ್ಯವಸ್ಥಾಪಕ ನಿರ್ದೇಶಕರು,**
**ಬೆಂ.ಮ.ಸಾ.ಸಂಸ್ಥೆ**

**ಪ್ರತಿಯನ್ನು :**

1) ವ್ಯವಸ್ಥಾಪಕ ನಿರ್ದೇಶಕರ ಆಪ್ತ ಕಾರ್ಯದರ್ಶಿಯವರು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ.
2) ನಿರ್ದೇಶಕರು (ಮಾ.ತ) ರವರ ಆಪ್ತ ಕಾರ್ಯದರ್ಶಿಯವರು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ.
3) ನಿರ್ದೇಶಕರು (ಭ.ಜಾ&ಪ) ರವರ ಆಪ್ತ ಕಾರ್ಯದರ್ಶಿಯವರು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ.
4) ಬೆಂ.ಮ.ಸಾ.ಸಂಸ್ಥೆಯ ಎಲ್ಲಾ ಇಲಾಖಾ ಮುಖ್ಯಸ್ಥರುಗಳ ಮಾಹಿತಿಗಾಗಿ.
5) ಮುಖ್ಯ ಸಂಚಾರ ವ್ಯವಸ್ಥಾಪಕರು (ಆ), ಕರಾರಸಾನಿಗಮ ರವರ ಮಾಹಿತಿಗಾಗಿ.
6) ವಿಭಾಗೀಯ ನಿಯಂತ್ರಣಾಧಿಕಾರಿಗಳು, ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ, ಈಶಾನ್ಯ ಹಾಗೂ ಕೇಂದ್ರೀಯ ವಲಯ, ಬೆಂಮಸಾಸಂಸ್ಥೆ ರವರುಗಳಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
7) ಎಲ್ಲಾ ವಿಭಾಗದ ವಿಭಾಗೀಯ ಸಂಚಾರ ಅಧಿಕಾರಿಗಳು, ವಿಭಾಗ ತಾಂತ್ರಿಕ ಅಭಿಯಂತರರು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
8) ಸಹಾಯಕ ಸಂಚಾರ ವ್ಯವಸ್ಥಾಪಕರು, ತನಿಖಾದಳ/ ಬಸ್ ನಿಲ್ದಾಣಗಳು/ಟಿಟಿಎಂಸಿಗಳು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9) ಎಲ್ಲಾ ಘಟಕ ವ್ಯವಸ್ಥಾಪಕರು, ಬೆಂ.ಮ.ಸಾ.ಸಂಸ್ಥೆ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
10) ಬೆಂ.ಮ.ಸಾ.ಸಂಸ್ಥೆಯ ನಿಯಂತ್ರಣಾ ಕೊಠಡಿಯ ದಾಖಲೆಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ),**
**ಬೆಂ.ಮ.ಸಾ.ಸಂಸ್ಥೆ**